**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 216 ಡಿಸಿಇ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:03-05-2017.

**ಇಂದ,**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು.

194

**ಇವರಿಗೆ,**

ಕುಲಸಚಿವರು,
ಬೆಂಗಳೂರು / ಮೈಸೂರು / ಕುವೆಂಪು / ಕರ್ನಾಟಕ / ಕಲಬುರಗಿ / ಮಂಗಳೂರು / ತುಮಕೂರು / ಕರ್ನಾಟಕ ಮುಕ್ತ / ಕನ್ನಡ / ಸೆಂಟ್ರಲ್ ಕರ್ನಾಟಕ / ದಾವಣಗೆರೆ / ವಿಜಯನಗರ ಶ್ರೀ ಕೃಷ್ಣದೇವರಾಯ / ರಾಣಿಚೆನ್ನಮ್ಮ / ವಿಶ್ವೇಶ್ವರಯ್ಯ ತಾಂತ್ರಿಕ / ಮಹಿಳಾ ವಿಶ್ವವಿದ್ಯಾಲಯಗಳು / ಎನ್.ಐ.ಟಿ.ಕೆ. ಸೂರತ್ಕಲ್.

ಮಾನ್ಯರೇ,

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ 2160 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ ಕುರಿತು.

ಉಲ್ಲೇಖ: ಪತ್ರ ಸಂಖ್ಯೆ: ಕಾಶಿಇ/225/ಹೈಕಹುಭ/2016-17/ನೇ.ವಿ-1, ದಿನಾಂಕ:04-04-2017.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಕಾಲೇಜು ಶಿಕ್ಷಣ ಆಯುಕ್ತರ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ 2160 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ಆಯ್ಕೆ ಮಾಡಲು ನೇಮಕಾತಿ ಪ್ರಕ್ರಿಯೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿದ್ದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಪ್ರಕ್ರಿಯೆಯನ್ನು ನಡೆಸಿ ಸರ್ಕಾರಕ್ಕೆ ಸಲ್ಲಿಸಿದ್ದ ಆಯ್ಕೆ ಪಟ್ಟಿಯಂತೆ ಅಂತಿಮ ಆಯ್ಕೆ ಪಟ್ಟಿಯನ್ನು ದಿನಾಂಕ: 04-02-2017ರಂದು ಅಧಿಸೂಚಿಸಲಾಗಿದೆ.

ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ) ನಿಯಮಗಳು 2014ರ ನಿಯಮ 9(3)ರಲ್ಲಿ ನೇಮಕಾತಿ ಪ್ರಾಧಿಕಾರವು ಪ್ರಮಾಣ ಪತ್ರ ಮತ್ತು ಅಂಕಪಟ್ಟಿಗಳ ನೈಜತೆಯನ್ನು ಖಚಿತಪಡಿಸಿಕೊಂಡು ಮಾತ್ರ ಅಂತಿಮ ಆಯ್ಕೆ ಪಟ್ಟಿಯ ಪ್ರಕಾರ ನೇಮಕಾತಿ ಆದೇಶಗಳನ್ನು ಹೊರಡಿಸಬೇಕೆಂದು ವಿಧಿಸಲಾಗಿದೆ. ಆದುದರಿಂದ,

ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ರಾಜ್ಯದಲ್ಲಿನ ಆಯಾ ವಿಶ್ವವಿದ್ಯಾಲಯಗಳಿಂದ ಪಡೆದಿರುವ ಸ್ನಾತಕೋತ್ತರ / ಪಿ.ಹೆಚ್.ಡಿ. ಪದವಿಗಳ ಪ್ರಮಾಣಪತ್ರಗಳನ್ನು ಪರಿಶೀಲಿಸಿ ಸಂಬಂಧಪಟ್ಟ ವಿಶ್ವವಿದ್ಯಾಲಯಗಳು ಯಾವುದೇ ಶುಲ್ಕ ವಿಧಿಸದೇ ಅವುಗಳ ನೈಜತೆ ಕುರಿತು ವರದಿಯನ್ನು ಒದಗಿಸುವಂತೆ ಕೋರಲು ನಿರ್ದೇಶಿತನಾಗಿದ್ದೇನೆ.

**[ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ**
**ಇವರಿಂದ ಅನುಮೋದಿತ]**

ತಮ್ಮ ನಂಬುಗೆಯ.

(ಸಹಿ) 3/5

**(ಕೆ.ಶಿವಲಿಂಗಯ್ಯ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ)

ಪ್ರತಿ:

ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು – ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.